



ಅರುಣ ಪಿ. ಭಟ್ಟ

## ವಾರ ಭವಿಷ್ಯ: 10.10.2024ರಿಂದ 16.10.2024ರವರೆಗೆ



**ಮೇಷ**

ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಬಹಳ ಕಾಲದ ನಂತರ ಸೋದರ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಉದ್ಯೋಗಸ್ಥರಿಗೆ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಕುಟುಂಬ ಬಾಂಧವ್ಯ ಉತ್ತಮವಾಗಿರುತ್ತದೆ. ವ್ಯಾಪಾರದಲ್ಲಿ ಉತ್ತಮ ಪ್ರಗತಿ ಇದೆ. ಶುಭದಿನ 11. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.



**ವೃಷಭ**

ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಖರ್ಚನ್ನು ಕೂಡ ಕಡಿಮೆ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ವರ್ಚಸ್ಸು, ಸ್ಥಾನಮಾನ ಕೂಡ ಇದೇ ಅವಧಿಯಲ್ಲಿ ಹೆಚ್ಚಾಗಲಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ಶುಭದಿನ 12. ಹನುಮಾನ್ ಚಾಲೀಸ್ ಪಠಿಸಿರಿ.



**ಮಿಥುನ**

ವ್ಯಾಪಾರ, ವ್ಯವಹಾರ ಅಥವಾ ಉದ್ಯಮ ಮಾಡುತ್ತಿರುವವರಿಗೆ ಅತ್ಯುತ್ತಮವಾದ ಸಮಯ ಇದು. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ಇದರಿಂದ ನಿಮಗೆ ಸಮಾಧಾನ ಸಂತೋಷ ಉಂಟಾಗುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಸಾಮಾಜಿಕ ಸ್ಥಾನಮಾನವು ಹೆಚ್ಚಾಗಲಿದೆ. ಶುಭದಿನ 11. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



**ಕಟಕ**

ಶೈಕ್ಷಣಿಕ ವಲಯದಲ್ಲಿ ಇರುವವರು, ವಿದ್ಯಾರ್ಥಿಗಳಿಗೆ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ತಂತ್ರಜ್ಞಾನ, ಸಾಹಿತ್ಯ ಹಾಗೂ ಸಿನಿಮಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಲವು ಅವಕಾಶಗಳು ಒಟ್ಟೊಟ್ಟಿಗೆ ಬರಲಿವೆ. ಜತೆಗೆ ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡದೇ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಶುಭದಿನ 14. ಶಿವಕವಚ ಪಠಣ ಮಾಡಿರಿ.



**ಸಿಂಹ**

ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ಹಣ ಹೂಡಿಕೆ ವ್ಯವಹಾರದಲ್ಲಿ ನಿಮ್ಮ ಸ್ಥಾನಮಾನಕ್ಕೆ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಕೈಕೊಡುವ ಸಾಧ್ಯತೆ ಇದೆ. ಬೆಳವಣಿಗೆ ಚೆನ್ನಾಗಿ ಇರಲಿದೆ. ಶುಭದಿನ 12. ಲಿಂಗಾಷ್ಟಕ ಪಠಿಸಿರಿ.



**ಕನ್ಯಾ**

ವಾರದ ಆರಂಭದಿಂದಲೇ ವ್ಯಾಪಾರದಲ್ಲಿ ನಿಮಗೆ ಇರುವ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ಧಾರ್ಮಿಕ ಕೆಲಸ ಕಾರ್ಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿ ಪಾಳಯದವರು ಬಹಳ ಪ್ರಯತ್ನಪಡುತ್ತಾರೆ. ಶುಭದಿನ 12. ಚಂಡಿ ಪಾರಾಯಣ ಮಾಡಿರಿ.



**ತುಲಾ**

ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಉದ್ಯೋಗ ಹಾಗೂ ಆರೋಗ್ಯದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಮಿಶ್ರ ಫಲಿತಾಂಶವನ್ನು ಕಾಣಲಿದ್ದೀರಿ. ಶುಭದಿನ 11. ಸೌಂದರ್ಯ ಲಹರಿ ಪಠಿಸಿರಿ.



**ವೃಶ್ಚಿಕ**

ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ವಾರದ ಆರಂಭದಲ್ಲಿ ಅದ್ಭುತವಾದ ಯಶಸ್ಸು ದೊರೆಯುವ ಅವಕಾಶಗಳಿವೆ. ಕ್ರೀಡೆ, ಸಿನಿಮಾ ಸಂಗೀತ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗೌರವಯುತವಾದ ಸ್ಥಾನಮಾನ ದೊರೆಯಲಿದೆ. ಹಲವು ಘಟನೆಗಳು ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಶುಭದಿನ 10. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.



**ಧನಸ್ಸು**

ಉದ್ಯೋಗಸ್ಥರಿಗೆ ತಮ್ಮ ಗೌರವ, ಸ್ಥಾನ ಉಳಿಸಿಕೊಳ್ಳುವುದು ಮುಖ್ಯವಾಗುತ್ತದೆ. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಪೋಷಕರ ಅಗತ್ಯಗಳನ್ನು ಅರಿತು ಅವುಗಳನ್ನು ಪೂರೈಸಲು ಹೆಚ್ಚು ಪ್ರಯತ್ನ ಪಡುತ್ತೀರಿ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆಗಳಿವೆ. ಶುಭದಿನ 11. ಕಾಲಭೈರವನ ಸೇವೆ ಮಾಡಿರಿ.



**ಮಕರ**

ವಾರದ ಆರಂಭದಲ್ಲಿ ಉತ್ತಮವಾದ ಅವಕಾಶ ದೊರೆಯಲಿದೆ. ಶ್ರಮಕ್ಕೆ ಉತ್ತಮ ಪ್ರತಿಫಲ ದೊರೆಯುತ್ತದೆ. ಶ್ರಮದ ಮೂಲಕವೇ ಆದಾಯ ಹೆಚ್ಚಳಕ್ಕೆ ಅವಕಾಶ ದೊರೆಯುತ್ತದೆ. ಉದ್ಯೋಗಸ್ಥರಿಗೆ ವಾರದ ಮಧ್ಯ ಭಾಗದಲ್ಲಿ ಬಡ್ತಿ ದೊರೆಯುವ ಅವಕಾಶಗಳಿವೆ. ನೀವು ಕಾರ್ಯ ನಿರ್ವಹಿಸುತ್ತಿರುವ ಇಲಾಖೆಯಲ್ಲಿ ಜವಾಬ್ದಾರಿ ಹಾಗೂ ಹಕ್ಕು ವಿಸ್ತರಣೆಗೆ ಅವಕಾಶ ಇದೆ. ಶುಭದಿನ 12. ವಿಷ್ಣು ಸಹಸ್ರನಾಮ ಪಠಿಸಿರಿ.



**ಕುಂಭ**

ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸದಲ್ಲಿ ನಿಮ್ಮ ಸಾಮರ್ಥ್ಯ ನಿರಂತರವಾಗಿ ಹೆಚ್ಚಾಗುತ್ತಾ ಸಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಕೆಲಸ ಕಾರ್ಯಗಳನ್ನು ಮಾಡಲಿದ್ದೀರಿ. ಶುಭದಿನ 13. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.



**ಮೀನ**

ವ್ಯವಹಾರ ಉದ್ಯಮದ ವಿಸ್ತರಣೆ ಬಗ್ಗೆ ಆಲೋಚನೆ ಮಾಡುತ್ತೀರಿ. ನಿಮ್ಮ ಸಂಸ್ಥೆಯ ದೀರ್ಘಾವಧಿ ಜವಾಬ್ದಾರಿಯೊಂದನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಆರೋಗ್ಯ ಕೂಡ ಉತ್ತಮವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ವಿಚಾರವಾಗಿಯೇ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 15. ಲಕ್ಷ್ಮೀನರಸಿಂಹ ಸ್ತೋತ್ರ ಪಠಿಸಿರಿ.